ಊ) ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಆಂಬ್ಯುಲೆನ್ಸ್ ಹಾಗೂ ತಾಂತ್ರಿಕ ಸಲಕರಣೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಹಳಿಯಾಳ ಮತ್ತು ಜೋಯಿಡಾ ತಾಲ್ಲೂಕಿನ ಆಸ್ಪತ್ರೆಗೆ ಒಂದೊಂದು ಸುಸ್ಥಿತಿಯಲ್ಲಿಯಿರುವ ಆಂಬ್ಯುಲನ್ಸ್ ಹಾಗೂ ತಾಂತ್ರಿಕ ಸಲಕರಣೆಗಳನ್ನು ನೀಡಲಾಗಿದೆ.

ಋ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರಗಳನ್ನು ನೀಡುವುದು):

ಉದ್ಭವಿಸುವುದಿಲ್ಲ.

ಋ) ಜೋಯಿಡಾ ತಾಲ್ಲೂಕಿಗೆ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ಪ್ರಾಥಮಿಕ ಕೇಂದ್ರ ಅಥವಾ ಆರೋಗ್ಯ ಕವಚದಂತಹ ಸಂಚಾರಿ ಆಸ್ಪತ್ರೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಜೋಯಿಡಾ ತಾಲ್ಲೂಕಿಗೆ ಈಗಾಗಲೇ ಸಂಚಾರಿ ಘಟಕವನ್ನು ಮಂಜೂರು ಮಾಡಿ ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಹಾಗೂ ವಾಹನ ಒದಗಿಸಲಾಗಿದೆ.

ಎ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು? (ವಿವರಗಳನ್ನು ನೀಡುವುದು):

ಉದ್ಭವಿಸುವುದಿಲ್ಲ.

ಸಂಖ್ಯೆ: ಆಕುಕ 57 ಹಚ್‌ಎಸ್‌ಎಂ 2009

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

<u>ಕರ್ನಾಟಕ ವಿಧಾನ ಸಭೆ</u>

112 ಶ್ರೀ. ಸುನೀಲ್ ಎ ಹೆಗಡೆ (ಹಳಿಯಾಳ)
ಶ್ರೀ.ಡಿ.ಸುಧಾಕರ, ಮಾನ್ಯ ಸಮಾಜ ಕಲ್ಯಾಣ ಸಚಿವರು.

ಅ) ಹಳಿಯಾಳ ತಾಲ್ಲೂಕಿನಲ್ಲಿ ಅಲ್ಪಸಂಖ್ಯಾತರಿಗೆ ಮತ್ತು ಹಿಂದುಳಿದ ವರ್ಗದವರಿಗೆ (ಕೃತ್ರಿಯ, ಮರಾಠ ಜದಸಂಖ್ಯೆ ಹೆಚ್ಚಿಗೆ ಇದ್ದು) ವಿದ್ಯಾರ್ಥಿನಿಲಯದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಬಂದಿದೆ.

ಹಳಿಯಾಳ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ 6 ವಿದ್ಯಾರ್ಥಿನಿಲಯಗಳಲ್ಲಿ ಒಂದು ಉಚಿತ ಸೇರಿ 4 ಸ್ವಂತ ಕಟ್ಟಡಗಳಲ್ಲಿನ ಹಾಗೂ 2 ಬಾಡಿಗೆ ಕಟ್ಟಡದಲ್ಲಿವೆ. ಬಾಡಿಗೆ ಕಟ್ಟಡದಲ್ಲಿರುವ ನಿಲಯಗಳಲ್ಲಿ ಕೊಠಡಿಗಳ ಕೊರತೆ ಇರುತ್ತದೆ.

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

ಬಾಡಿಗೆ ಕಟ್ಟಡದಲ್ಲಿರುವ ಹಳಿಯಾಳದ ಮೆಟ್ರಿಕ್–ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಹಾಗೂ ಮೆಟ್ರಿಕ್–ಪೂರ್ವ ಬಾಲಕಿಯರ ನಿಲಯಗಳಿಗೆ ನಿವೇಶನ ಪಡೆಯಲು ಕ್ರಮ ತೆಗೆದುಕೊಳ್ಳಲಾಗುತ್ತಿದ್ದು, ಆಯವ್ಯಯದ ಲಭ್ಯತೆ ಆಧಾರದ ಮೇಲೆ ನಿವೇಶನ ಪಡೆದ ನಂತರ ಕಟ್ಟಡ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು.

ಇ) ಪದವಿ ಓದುತ್ತಿರುವ ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ ವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ನಿವೇಶನ ದೊರೆತ ನಂತರ ಕಟ್ಟಡ ನಿರ್ಮಿಸಲಾಗುವುದು.

ಈ) ಹಾಗಿದ್ದಲ್ಲಿ ವಿದ್ಯಾರ್ಥಿನಿಲಯವನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಹಳಿಯಾಳದಲ್ಲಿರುವ ಮೊರಾರ್ಜಿ ದೇಸಾಯಿ ವಸತಿಶಾಲೆಗೆ ಕಟ್ಟಡವನ್ನು ನಿರ್ಮಿಸಲು ಸರ್ಕಾರ ಅನುದಾನವನ್ನು ಬಿಡುಗಡೆ ಮಾಡಿದೆಯೇ;

ಈ ವಸತಿ ಶಾಲೆಯು 2004–05ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಮಂಜೂರಾಗಿದ್ದು, ಶಾಲಾ ಸಂಕೀರ್ಣ ನಿರ್ಮಾಣ ಮಾಡಲು ಜಮೀನು ಮಂಜೂರಾಗಿರುವುದಿಲ್ಲ. ಸಂಬಂಧಪಟ್ಟ ಕಂದಾಯ ಅಧಿಕಾರಿಗಳಿಗೆ ಜಮೀನು ಮಂಜೂರು ಮಾಡಲು ಪತ್ರ ಬರೆಯಲಾಗಿದೆ.

ಊ) ಹಾಗಿದ್ದಲ್ಲಿ, ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು (ವಿವರಗಳನ್ನು ನೀಡುವುದು)

ಜಮೀನು ಮಂಜೂರಾದ ನಂತರ 2009–10ನೇ ಸಾಲಿನ ಆಯವ್ಯಯದಲ್ಲಿ ಲಭ್ಯವಾಗುವ ಅನುದಾನವನ್ನು ಪರಿಗಣಿಸಿ ಶಾಲಾ ಸಂಕೀರ್ಣವನ್ನು ನಿರ್ಮಿಸಲು ಪರಿಶೀಲಿಸಲಾಗುವುದು.

ಖ) ಜೋಯಿಡಾ ತಾಲ್ಲೂಕಿನಲ್ಲಿ ಪದವಿಪೂರ್ವ ಮತ್ತು ಪದವಿ ಕಾಲೇಜಿನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಯಾವಾಗ ನಿರ್ಮಿಸಲಾಗುವುದು;(ವಿವರಗಳನ್ನು ನೀಡುವುದು)?

ಜೋಯಿಡಾ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ 8 ವಿದ್ಯಾರ್ಥಿನಿಲಯಗಳಲ್ಲಿ 3ಕ್ಕೆ ಸ್ವಂತ ಕಟ್ಟಡವಿದ್ದು, ಒಂದು ನಿಲಯ ಉಚಿತ ಕಟ್ಟಡದಲ್ಲಿರುತ್ತದೆ. ಉಳವಿಯಲ್ಲಿನ ಮೆಟ್ರಿಕ್–ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ಕಟ್ಟಡ ಪ್ರಗತಿಯಲ್ಲಿರುತ್ತದೆ.

1) ಮೆಟ್ರಿಕ್–ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಜಗಲಬೇಟ
2) ಮೆಟ್ರಿಕ್–ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಜಗಲಬೇಟ
3) ಮೆಟ್ರಿಕ್–ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಜೋಯಿಡಾ

ಈ 3 ವಿದ್ಯಾರ್ಥಿನಿಲಯಗಳಿಗೆ ನಿವೇಶನ ಪಡೆದ ನಂತರ ಕಟ್ಟಡ ನಿರ್ಮಿಸಲಾಗುವುದು. ನಿವೇಶನಗಳನ್ನು ಒದಗಿಸುವಂತೆ ಜಿಲ್ಲಾಧಿಕಾರಿಗಳೊಂದಿಗೆ ಪತ್ರ ವ್ಯವಹಾರ ನಡೆಸಲಾಗಿದೆ.

ಸಂಖ್ಯೆ:ಸಕಇ 82 ಬಿಎಂಎಸ್ 2009.

(ಡಿ.ಸುಧಾಕರ)
ಸಮಾಜ ಕಲ್ಯಾಣ ಸಚಿವರು

<u>ಕರ್ನಾಟಕ ವಿಧಾನ ಸಭೆ.</u>

113 ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ)
ಮಾನ್ಯ ಕಾರ್ಮಿಕ ಸಚಿವರು.

ಅ) ಜೋಯಿಡಾ ತಾಲ್ಲೂಕಿಗೆ ಹಿಂದಿನ ಸರ್ಕಾರವು ಐ.ಟಿ.ಐ ಕಾಲೇಜು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?